**ಸಹಿಷ್ಣುತೆ ಪರೀಕ್ಷೆ (Endurance Test) ಹಾಗೂ ದೇಹದಾರ್ಢ್ಯತೆ ಪರೀಕ್ಷೆ (Physical Standard Test):**

**ಸಹಿಷ್ಣುತೆ ಪರೀಕ್ಷೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳದ ಮಾಹಿತಿಯನ್ನು ಒಳಗೊಂಡ ಕರೆ ಪತ್ರಗಳನ್ನು ಪೊಲೀಸ್ ಇಲಾಖೆಯ ವೆಬ್‌ಸೈಟ್ "http://www.ksp.gov.in" ನಲ್ಲಿ ಅಪ್‌ಲೋಡ್ ಮಾಡಲಾಗುವುದು. ಅಭ್ಯರ್ಥಿಯು ತನ್ನ ಕರೆ ಪತ್ರವನ್ನು ಪೊಲೀಸ್‌ಇಲಾಖೆಯ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಬೇಕು. ಅಭ್ಯರ್ಥಿಗಳಿಗೆ ಕರೆ ಪತ್ರಗಳನ್ನು ಅಂಚೆ ಮೂಲಕ ರವಾನಿಸಲಾಗುವುದಿಲ್ಲ. ಆದ್ದರಿಂದ ಅಭ್ಯರ್ಥಿಗಳು ಇಲಾಖೆಯ ವೆಬ್‌ಸೈಟ್‌ನ್ನು ಮೇಲಿಂದ ಮೇಲೆ ವೀಕ್ಷಿಸುತ್ತಿರಬೇಕು. ಕರೆ ಪತ್ರವಿಲ್ಲದೆ ಹಾಜರಾಗುವ ಅಭ್ಯರ್ಥಿಗಳಿಗೆ ಇಟಿ, ಪಿಎಸ್‌ಟಿ ಮತ್ತು ಪಿಇಟಿ ಪರೀಕ್ಷೆಗಳಿಗೆ ಅನುವು ಮಾಡಲಾಗುವುದಿಲ್ಲ.**

ಎ) **ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ನೇಮಕಾತಿ ಪ್ರಾಧಿಕಾರ ನಿಗದಿಪಡಿಸಿದ ಕೇಂದ್ರಗಳಲ್ಲಿ ನಡೆಸಲಾಗುವುದು.** ಆಯ್ಕೆ ಸಮಿತಿಯು ಯಾವುದೇ ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ ಇದನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ತಿಳಿಸಲಾಗುವುದು. ಎಲ್ಲಿಯೇ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ನಡೆಸಿದರೂ ಅಭ್ಯರ್ಥಿಗಳು ಸದರಿ ಪರೀಕ್ಷೆಗೆ ಹಾಜರಾಗತಕ್ಕದ್ದು, ಇಲ್ಲದಿದ್ದಲ್ಲಿ ಗೈರುಹಾಜರು/ಅನರ್ಹಗೊಳಿಸಲಾಗುವುದು.

ಬಿ) **ಒಂದಕ್ಕಿಂತ ಹೆಚ್ಚು ಅರ್ಜಿ ಸಲ್ಲಿಸಿ ಒಂದಕ್ಕಿಂತ ಹೆಚ್ಚು ಕಡೆಗಳಲ್ಲಿ ದೈಹಿಕ ಪರೀಕ್ಷೆಗಳಿಗೆ ಹಾಜರಾದರೆ, ಅಂತಹ ಅಭ್ಯರ್ಥಿಯ ಅಭ್ಯರ್ಥಿತನವನ್ನು ರದ್ದು ಪಡಿಸಲಾಗುವುದು. (ವಿಶೇಷ ಸೂಚನೆಗಳು 18(ಸಿ)ನ್ನು ನೋಡಿ) ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.**

ಅಭ್ಯರ್ಥಿಗಳು ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಬರುವಾಗ, ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು ಮತ್ತು ಅದರ ಒಂದು ದೃಢೀಕೃತ ಪ್ರತಿಯನ್ನು ನೀಡುವುದು.

i) ಪಾಸ್‌ಪೋರ್ಟ್ (Passport)
ii) ಚಾಲನಾ ಪರವಾನಗಿ ಪತ್ರ (Driving License)
iii) ಪ್ಯಾನ್ ಕಾರ್ಡ್ (PAN Card)
iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)
v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)
vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)
vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Community Certificate with Photo)
viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)
ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)
x) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).

ಸಿ) ಕರೆಪತ್ರದ ಜೊತೆಗೆ ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿಯನ್ನು ಸಹ ತರತಕ್ಕದ್ದು, ತಪ್ಪಿದಲ್ಲಿ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ. ನಿಗದಿತ ದಿನಾಂಕ ಹಾಗೂ ಸಮಯದಲ್ಲಿ ಹಾಜರಾಗದಿದ್ದರೆ ಅಂತಹವರನ್ನು ಅನರ್ಹ ಗೊಳಿಸಲಾಗುವುದು ಹಾಗೂ ಬದಲಿ ದಿನಾಂಕವನ್ನು ನೀಡಲಾಗುವುದಿಲ್ಲ.

ಡ) **ವಿಶೇಷ ಮೀಸಲು ಸಬ್–ಇನ್ಸ್‌ಪೆಕ್ಟರ್ (ಕೆಎಸ್‌ಆರ್‌ಪಿ) ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಸಹಿಷ್ಣುತೆ ಪರೀಕ್ಷೆ : (Endurance Test)**

i) ದೇಹದಾರ್ಢ್ಯತೆ ಪರೀಕ್ಷೆಗೆ ಅರ್ಹರಾಗಲು ಅಭ್ಯರ್ಥಿಗಳು ಈ ಕೆಳಗಿನ ಎಲ್ಲಾ ಸಹಿಷ್ಣುತೆ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು ಹಾಗೂ ಈ ಕೆಳಗಿನ ಎಲ್ಲಾ ಸಹಿಷ್ಣುತೆ ಪರೀಕ್ಷೆಗಳನ್ನು ಕೆಳಗೆ ನಮೂದಿಸಿರುವ ಕ್ರಮದಲ್ಲಿಯೇ ಭಾಗವಹಿಸುವುದು ಕಡ್ಡಾಯವಾಗಿರುತ್ತದೆ. ಈ ಪರೀಕ್ಷೆಗಳಲ್ಲಿ ಭಾಗವಹಿಸದೆ ತಿರಸ್ಕರಿಸುವವರು/ ವಿಫಲವಾಗುವವರು, ಅನರ್ಹತೆಗೆ ಒಳಗಾಗುವರು. ಪ್ರತಿಯೊಂದು ಸಹಿಷ್ಣುತೆ ಪರೀಕ್ಷೆ ಮುಗಿದ ನಂತರ ನಿಗದಿತ ನಮೂನೆಗೆ ಅಭ್ಯರ್ಥಿಯು ಭರ್ತಿ ಮಾಡಿರುವ ವಿವರಗಳನ್ನು ಪರಿಶೀಲಿಸಿ ಸಹಿ ಹಾಕಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಯು ಅನರ್ಹತೆಗೊಳಗಾಗುವನು. ಸಹಿಷ್ಣುತೆ ಪರೀಕ್ಷೆಗೆ ಅಂಕಗಳನ್ನು ನೀಡಲಾಗುವುದಿಲ್ಲ. ಇವು ಕೇವಲ ಅರ್ಹತೆಗೆ ಮಾತ್ರ ಸೀಮಿತವಾಗಿರುತ್ತದೆ.

| **ಸಹಿಷ್ಣುತೆ ಪರೀಕ್ಷೆ** | | |
|---|---|---|
| | **ಅಂಶಗಳು** | **ಅರ್ಹತಾ ವೇಳೆ** |
| **ಎಲ್ಲಾ ಸಾಮಾನ್ಯ ಅಭ್ಯರ್ಥಿಗಳಿಗೆ** (ಸೇವಾನಿರತ/ಮಾಜಿ ಸೈನಿಕರನ್ನು ಹೊರತುಪಡಿಸಿ) | 2 ಕೀಲೋ ಮೀಟರ್ ಓಟ | 10 ನಿಮಿಷ ಮೀರದಂತೆ |
| | ಉದ್ದ ಜಿಗಿತ<br>ಅಥವಾ<br>ಎತ್ತರ ಜಿಗಿತ | 3.8 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>ಅಥವಾ<br>1.2 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |
| | ಗುಂಡು ಎಸೆತ (7.26 ಕೆ.ಜಿ.) | 5.60 ಮೀಟರ್‌ಗಿಂತ ಕಡಿಮೆ ಇಲ್ಲದಂತೆ |

| | **ಅಂಶಗಳು** | **ಅರ್ಹತಾ ವೇಳೆ** |
|---|---|---|
| **ಸೇವಾನಿರತ ಅಭ್ಯರ್ಥಿಗಳಿಗೆ** | 1 ಕೀಲೋ ಮೀಟರ್ ಓಟ | 4 ನಿಮಿಷ ಮೀರದಂತೆ |
| | ಉದ್ದ ಜಿಗಿತ<br>ಅಥವಾ<br>ಎತ್ತರ ಜಿಗಿತ | 3.20 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>ಅಥವಾ<br>1 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |
| | ಗುಂಡು ಎಸೆತ (7.26 ಕೆ.ಜಿ.) | 4.50 ಮೀಟರ್‌ಗಿಂತ ಕಡಿಮೆ ಇಲ್ಲದಂತೆ |
| | **ಅಂಶಗಳು** | **ಅರ್ಹತಾ ವೇಳೆ** |
| **ಮಾಜಿ ಸೈನಿಕ ಅಭ್ಯರ್ಥಿಗಳಿಗೆ** | 400 ಮೀಟರ್ ಓಟ | 2 ನಿಮಿಷ ಮೀರದಂತೆ |
| | ಉದ್ದ ಜಿಗಿತ<br>ಅಥವಾ<br>ಎತ್ತರ ಜಿಗಿತ | 2.50 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>ಅಥವಾ<br>0.90 ಮೀಟರ್‌ಗಿಂತ ಕಡಿಮೆ ಇಲ್ಲದಂತೆ |
| | ಗುಂಡು ಎಸೆತ (4 ಕೆ.ಜಿ.) | 3.75 ಮೀಟರ್‌ಗಿಂತ ಕಡಿಮೆ ಇಲ್ಲದಂತೆ |

| **ಸಹಿಷ್ಣುತೆ ಪರೀಕ್ಷೆಯಲ್ಲಿ ಅರ್ಹಗೊಂಡ ಅಭ್ಯರ್ಥಿಗಳಿಗೆ ಮಾತ್ರ:**<br>**ದೇಹದಾರ್ಢ್ಯತೆ ಪರೀಕ್ಷೆ** | | |
|---|---|---|
| **ಎಲ್ಲಾ ಸಾಮಾನ್ಯ, ಸೇವಾನಿರತ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳಿಗೆ** | ಕನಿಷ್ಠ ಎತ್ತರ | ಸಾಮಾನ್ಯ ಅಭ್ಯರ್ಥಿಗಳಿಗೆ 170ಸೆಂ.ಮೀ. ಕಡಿಮೆ ಇಲ್ಲದಂತೆ |
| | | ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಅನ್ವಯಿಸುವುದಿಲ್ಲ |
| | | ಸೇವಾನಿರತ ಅಭ್ಯರ್ಥಿಗಳಿಗೆ 168 ಸೆಂ.ಮೀ. |
| | ಎದೆ ಸುತ್ತಳತೆ | 86 ಸೆಂ.ಮೀ. (ಪೂರ್ತಿ ವಿಸ್ತರಿಸಿದಾಗ)<br>ಕನಿಷ್ಠ ವಿಸ್ತರಣೆ 5 ಸೆಂ.ಮೀ. |

**ವಿಶೇಷ ಸೂಚನೆಗಳು:-**

**ಸಹಿಷ್ಣುತೆ ಪರೀಕ್ಷೆಗೆ ಹಾಜರಾಗುವ ಮುನ್ನ ಅಭ್ಯರ್ಥಿಗಳು ದೈಹಿಕವಾಗಿ ಸದೃಢರಿರಬೇಕು. ಈ ಪರೀಕ್ಷೆಗಳ ಸಂದರ್ಭದಲ್ಲಿ ಸಂಭವಿಸುವ ಯಾವುದೇ ರೀತಿಯ ಅನಾಹುತ / ತೊಂದರೆಗಳಿಗೆ ಪೊಲೀಸ್ ಇಲಾಖೆ/ ನೇಮಕಾತಿ ಸಮಿತಿಯವರು ಜವಾಬ್ದಾರರಾಗಿರುವುದಿಲ್ಲ. ಅಭ್ಯರ್ಥಿಗಳು ಅವರ ಸ್ವಂತ ಹಿತದೃಷ್ಟಿಯಿಂದ ಅವರ ದೇಹದ ವೈದ್ಯಕೀಯ ಪರೀಕ್ಷೆಯನ್ನು ಮಾಡಿಸಿಕೊಂಡು, ಅಭ್ಯರ್ಥಿಯ ಆರೋಗ್ಯವು ಎಲ್ಲ ರೀತಿಯಿಂದಲೂ ಸದೃಢವಾಗಿದೆ ಎಂದು ಖಚಿತ ಪಡಿಸಿಕೊಂಡು ಇಲಾಖೆ ನಡೆಸುವ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಎಲ್ಲ ವಿಧದಿಂದಲೂ ಅರ್ಹನೆಂದು ಮುಂಚಿತವಾಗಿಯೇ ತಿಳಿದುಕೊಂಡು ಹಾಜರಾಗತಕ್ಕದ್ದು. ಈ ದಿಸೆಯಲ್ಲಿ ಕನಿಷ್ಠ ಒಂದು ತಿಂಗಳ ಮುಂಚೆಯಿಂದಲೇ ಸಹಿಷ್ಣುತೆ ಪರೀಕ್ಷೆಗೆ ಅಭ್ಯರ್ಥಿಗಳು ಸಾಕಷ್ಟು ಅಭ್ಯಾಸ ಮಾಡಿಕೊಳ್ಳತಕ್ಕದ್ದು. ಸಹಿಷ್ಣುತೆ ಪರೀಕ್ಷೆಯಲ್ಲಿ ಯಾವ ಅನಾಹುತಗಳಿಗೂ ಇಲಾಖೆ ಜವಾಬ್ದಾರರಾಗುವುದಿಲ್ಲ. ಈ ಪರೀಕ್ಷೆಗಳಿಗೆ ಅಭ್ಯರ್ಥಿಗಳು ತಮ್ಮ ಸ್ವಂತ ಜವಾಬ್ದಾರಿ ಹಾಗೂ ಸ್ವಇಚ್ಛೆಯಿಂದ ಭಾಗವಹಿಸುವುದು.**

**ಟಿಪ್ಪಣಿ :**

i) ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಒಂದು ದೈಹಿಕ ಪರೀಕ್ಷೆಯ ಸಮಿತಿಯು ನಡೆಸುತ್ತದೆ. ಯಾವುದೇ ಇತರೆ ವೈದ್ಯಕೀಯ ಪ್ರಮಾಣ ಪತ್ರದ ಆಧಾರದ ಮೇಲೆ ಪರಿಗಣಿಸಲಾಗುವುದಿಲ್ಲ ದೈಹಿಕ ಪರೀಕ್ಷೆಯ ಸಮಿತಿಯು ನೀಡುವ ಫಲಿತಾಂಶವೇ ಅಂತಿಮವಾಗಿರುತ್ತದೆ.

ii) ಅಭ್ಯರ್ಥಿಗಳು ಮೇಲ್ಕಂಡ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳಲ್ಲಿ ಅರ್ಹರಾಗಿದ್ದರೂ ಸಹ ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಯು ಶಾರೀರಿಕವಾಗಿ ಸದೃಢರಾಗಿರಬೇಕಾಗಿರುತ್ತದೆ. ಆದ್ದರಿಂದ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸಲು ಅಡ್ಡಿಪಡಿಸುವಂತಹ ಯಾವುದೇ ದೈಹಿಕ ನ್ಯೂನತೆಗಳನ್ನು / ಅಂಗವೈಕಲ್ಯಗಳನ್ನು ಹೊಂದಿರಬಾರದು.

iii) ಸಹಿಷ್ಣತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆ ಪೂರ್ಣಗೊಂಡ ನಂತರ ಅಭ್ಯರ್ಥಿಗಳು ದೈಹಿಕ ಪರೀಕ್ಷೆ ಸಮಿತಿ ಸಮ್ಮುಖದಲ್ಲಿ ನಿಗದಿತ ನಮೂನೆಗೆ ಸಹಿ ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು. ಇಲ್ಲವಾದರೆ ಅಂತಹವರನ್ನು ಅನರ್ಹರೆಂದು ಪರಿಗಣಿಸಲಾಗುವುದು.

iv) ಅಭ್ಯರ್ಥಿಗಳು ಸಹಿಷ್ಣುತೆ ಪರೀಕ್ಷೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹಗೊಂಡಲ್ಲಿ ಮಾತ್ರ ಲಿಖಿತ ಪರೀಕ್ಷೆಗೆ ಅರ್ಹಗೊಳ್ಳುವರು.

v) ಪಾರದರ್ಶಕತೆಗಾಗಿ ಮೇಲೆ ಹೇಳಿದ ಎಲ್ಲಾ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ವೀಡಿಯೋಗ್ರಫಿ ಅಥವಾ CCTV Camera ಗಳಲ್ಲಿ ಸೆರೆಹಿಡಿಯಲಾಗುವುದು.